ಮತ್ತು ಆರೋಗ್ಯಕರವಾದ ಆಹಾರವನ್ನು ವಿದ್ಯಾರ್ಥಿಗಳಿಗೆ ಸಂಬಂಧಪಟ್ಟ ಸಿಬ್ಬಂದಿ ವರ್ಗದವರು ನೀಡುವಂತೆ ಅನೇಕ ಸೂಚನೆಗಳನ್ನು ನೀಡಿದ್ದು, ಪ್ರಸಕ್ತ ಸಾಲಿನಲ್ಲಿ " ಪುನಶ್ಚೇತನ " ಕಾರ್ಯಕ್ರಮದಡಿ ಈ ಬಗ್ಗೆ ಮನದಟ್ಟು ಮಾಡಲಾಗಿದೆ.

ಸರ್ಕಾರವು ಸ್ವಂತ ಕಟ್ಟಡಗಳಿಲ್ಲದ ಎಲ್ಲಾ ಸರ್ಕಾರಿ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳನ್ನೊಳಗೊಂಡ ಕಟ್ಟಡಗಳನ್ನು ನಿವೇಶನ ಲಭ್ಯತೆಯ ಮೇಲೆ ನಿರ್ಮಿಸಲು ರಾಜ್ಯ ಯೋಜನೆಯಡಿ, ಕೇಂದ್ರ ಪುರಸ್ಕೃತ ಯೋಜನೆಯಡಿ ಹಾಗೂ ಜಿಲ್ಲಾ ವಲಯದಡಿ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ. ವಿದ್ಯಾರ್ಥಿನಿಲಯಗಳ ಕಟ್ಟಡಗಳಲ್ಲಿ ವಾಸಿಸುವ ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು ವಿದ್ಯುತ್, ಶೌಚಾಲಯ ಹಾಗೂ ಇನ್ನಿತರೆ ದುರಸ್ತಿ ಅವಶ್ಯಕತೆಯನ್ನು ಪರಿಗಣಿಸಿ ರಾಜ್ಯ ಹಾಗೂ ಜಿಲ್ಲಾ ವಲಯದಡಿ ಈ ಕಾರ್ಯಕ್ರಮಗಳಿಗೆ ಹಣ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಹುಬ್ಬಳ್ಳಿ ಧಾರವಾಡ ನಗರಕ್ಕೆ ಪ್ರತ್ಯೇಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಸ್ಥಾಪನೆ

4724 - ಶ್ರೀ ಜೆ. ಅಲೆಕ್ಸಾಂಡರ್ (ಭಾರತೀನಗರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹುಬ್ಬಳ್ಳಿ ಧಾರವಾಡ ನಗರಕ್ಕೆ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಮಾದರಿಯಂತೆ ಪ್ರತ್ಯೇಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಸ್ಥಾಪನೆ ಮಾಡುವ ಪ್ರಸ್ತಾವನೆ ಸರ್ಕಾರಕ್ಕೆ ಇದೆಯೇ?*

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

ಅ) ಸದ್ಯಕ್ಕೆ ಈ ವಿಷಯಕ್ಕೆ ಸಂಬಂಧಪಟ್ಟಂತೆ ಯಾವ ಪ್ರಸ್ತಾವನೆಯು ಇರುವುದಿಲ್ಲ.

ಮಂಡ್ಯ ನಗರದ ಒಳಚರಂಡಿ ಯೋಜನೆ ಬಗ್ಗೆ

4725 - ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಂಡ್ಯ ನಗರದಲ್ಲಿ ಮೊದಲನೆ ಹಂತದ ಒಳಚರಂಡಿ ಯೋಜನೆ ಅನುಷ್ಠಾನ ಯಾವ ಹಂತದಲ್ಲಿದೆ?*

ಆ) *ಈ ಕಾಮಗಾರಿ ಪ್ರಸ್ತುತ ಸ್ಥಗಿತಗೊಂಡಿರುವುದು, ಸರ್ಕಾರದ ಗಮನಕ್ಕೆ ಬಂದಿದೆಯೆ? ಹಾಗೂ ಅದಕ್ಕೆ ಕಾರಣಗಳೇನು?*

ಇ) *ಮಂಡ್ಯ ನಗರಕ್ಕೆ ಎರಡನೇ ಹಂತದ ಒಳಚರಂಡಿ ಯೋಜನೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?*